# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಪೋರ್ ಇಎಫ್ ಕನ್‌ಷ್ಟ್ರಕ್ಷನ್ಸ್ ಕಂಪನಿಗೆ ಹಂಚಿಕೆಯಾಗಿರುವ 12.75 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 24.8 ಮೆ.ವ್ಯಾಗೆ ವೃದ್ಧಿಸುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಇಎನ್ 326 ಎನ್‌ಸಿಇ 2006 ದಿನಾಂಕ:28.01.2008.
2) ಸರ್ಕಾರದ ಆದೇಶ ಸಂಖ್ಯೆ: ಇಎನ್ 156 ಎನ್‌ಸಿಇ 2015 ದಿನಾಂಕ:29.09.2015.
3) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: KRED/08/RWE/2006 R-464 ದಿನಾಂಕ:24.07.2006.

* * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದಲ್ಲಿ ಮೆ: ರಿಲೆಯಬಲ್ ವಿಂಡ್ ಎನರ್ಜಿ ಕಂಪನಿಗೆ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ರಾಮಜೋಗಿಹಳ್ಳಿ, ಮಚ್ಚುಕುಂಟೆ ಮತ್ತು ಬಾಳೇನಹಳ್ಳಿ ಗ್ರಾಮಗಳಲ್ಲಿ 12.75 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿತ್ತು. ತದನಂತರ, ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸರ್ಕಾರದ ಆದೇಶದಲ್ಲಿ ಸದರಿ ಕಂಪನಿಯ ಹೆಸರನ್ನು ಮೆ: ಪೋರ್ ಇಎಫ್ ಕನ್‌ಷ್ಟ್ರಕ್ಷನ್ಸ್ ಕಂಪನಿ ಎಂದು ಹೆಸರು ಬದಲಾಯಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರನ್ವಯ ಏಕ ಕಡತ ಪದ್ಧತಿಯಡಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಮೆ: ಪೋರ್ ಇಎಫ್ ಕನ್‌ಷ್ಟ್ರಕ್ಷನ್ಸ್ ಕಂಪನಿಗೆ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ರಾಮಜೋಗಿಹಳ್ಳಿ, ಮಚ್ಚುಕುಂಟೆ ಮತ್ತು ಬಾಳೇನಹಳ್ಳಿ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 12.75 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 24.8 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸಿ, ತದನಂತರ ಹೆಚ್ಚಳಗೊಂಡ 24.8 ಮೆ.ವ್ಯಾ. ಸಾಮರ್ಥ್ಯದಿಂದ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ :ಪಿಜಿಎ ಡೆವಲಪರ್ಸ್ ಅಂಡ್ ಇನ್‌ಫ್ರಾಸ್ಟ್ರಚರ್ ಪ್ರೈವೇಟ್ ಲಿಮಿಟೆಡ್ ಮತ್ತು 6 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ :ಪೋರ್ ಇಎಫ್ ವಿಂಡ್ ಪವರ್ ಪ್ರೈವೇಟ್ ಲಿಮಿಟೆಡ್ ಕಂಪನಿಗಳಿಗೆ ವರ್ಗಾಯಿಸುವಂತೆ ಅಭಿವೃದ್ಧಿದಾರರು ಮನವಿ ಮಾಡಿದ್ದು, ಈ ವರ್ಗಾವಣೆಗೆ ಮೂರು ಕಂಪನಿಯವರು ಸಹಮತಿ ನೀಡಿ ನಿಯಮಾನುಸಾರ ಸಾಮರ್ಥ್ಯ ಹೆಚ್ಚಳ ಹಾಗೂ ವರ್ಗಾವಣೆ ಶುಲ್ಕಗಳನ್ನು ಪಾವತಿಸಿರುತ್ತಾರೆ. ಅಲ್ಲದೆ, ಉತ್ಪತ್ತಿಯಾಗುವ ವಿದ್ಯುತ್ತನ್ನು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ ಮತ್ತು ವೀಲಿಂಗ್ ಅಂಡ್ ಬ್ಯಾಂಕಿಂಗ್ ಮುಖಾಂತರ 3ನೇ ವ್ಯಕ್ತಿಗೆ ಮಾರಾಟ ಮಾಡುವುದಾಗಿಯೂ ಸಹ ತಿಳಿಸಿರುವುದರಿಂದ ಈ ಪ್ರಸ್ತಾವನೆಯನ್ನು ಪರಿಗಣಿಸಬಹುದೆಂದು ಹಾಗೂ ಯೋಜನೆಯ ಅನುಷ್ಠಾನಕ್ಕೆ ದಿನಾಂಕ : 27.01.2014 ರಿಂದ 26.12.2016 ರವರೆಗೆ ಕಾಲಾವಕಾಶ ವಿಸ್ತರಣೆ ಮಾಡುವಂತೆ ಶಿಫಾರಸ್ಸು ಮಾಡಿ, ಸದರಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 15 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 14.01.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಇಎನ್ 326 ಎನ್‌ಸಿಇ 2006 ದಿನಾಂಕ:28.01.2008 ರಲ್ಲಿ ಮೆ: ಪೋರ್ ಇಎಫ್ ಕನ್‌ಷ್ಟ್ರಕ್ಷನ್ಸ್ ಕಂಪನಿಗೆ (ಕಂಪನಿಯ ಹಿಂದಿನ ಹೆಸರು ಮೆ: ರಿಲೆಯಬಲ್ ವಿಂಡ್ ಎನರ್ಜಿ) ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ರಾಮಜೋಗಿಹಳ್ಳಿ, ಮಚ್ಚುಕುಂಟೆ ಮತ್ತು ಬಾಳೇನಹಳ್ಳಿ ಗ್ರಾಮಗಳಲ್ಲಿ ಹಂಚಿಕೆಯಾಗಿದ್ದ 12.75 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ 24.8 ಮೆ.ವ್ಯಾ.ಗೆ ಹೆಚ್ಚಿಸಿ ಯೋಜನೆಯನ್ನು ದಿನಾಂಕ: 31.03.2017 ರೊಳಗಾಗಿ ಅನುಷ್ಠಾನಗೊಳಿಸುವ ಹಾಗೂ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಆದೇಶಿಸಲಾಗಿದೆ.

Proposed Geographical area description for 24.8 MW project detailed in as below:

| Sl. No. | Near by villages of the proposed area and district | Geographical area description of the project | Sanctioned capacity in MW | Enhancement proposed in MW | Total capacity including proposed enhancedment in MW |
|---|---|---|---|---|---|
| 1 | Ramajogihalli, Muchchukunte and Balenahalli, Chitradurga District | A NW-SE oriented non-contigous ridges are located on the North-West of Balenahalli village and are having open scrub features with two peaks are held in the following Geographical co-ordinates:<br>Latitude: 14°15'0"- 14°16'50"N<br>Longitude: 76°31'48"- 76°32'53"E<br>Peaks: 681, 729m Amsl | 12.75MW | 12.05 MW | 24.8 MW |

ಷರತ್ತುಗಳು

1 ಸದರಿ ಕಂಪನಿಯು ಸರ್ಕಾರಿ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ 45 ದಿನಗಳ ಒಳಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 ಸದರಿ ಕಂಪನಿಯು ಉತ್ಪಾದಿಸುವ ವಿದ್ಯುತ್ತನ್ನು ಮಾರಟ ಮಾಡುವ ಕುರಿತು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ / ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಿದೆ.

3 ಸದರಿ ಕಂಪನಿಯು ಯೋಜನೆಗೆ ಸಂಬಂಧಿಸಿದಂತೆ ನಿಯಮಾನುಸಾರ ಪಾವತಿಸಬೇಕಾಗಿರುವ ಎಲ್ಲಾ ತರಹದ ಶುಲ್ಕಗಳನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.

4 ಸದರಿ ಕಂಪನಿಯು ಯೋಜನೆಯನ್ನು ದಿನಾಂಕ: 31.03.2017 ರೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

5 ಕರ್ನಾಟಕ ಭೂಸುಧಾರಣ ಕಾಯ್ದೆ 1961ರ ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

6 ಈ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಉಳಿದಂತೆ ಸರ್ಕಾರದ ಮೂಲ ಹಂಚಿಕೆ ಆದೇಶ ಸಂಖ್ಯೆ: ಇಎನ್ 326 ಎನ್‌ಸಿಇ 2006 ದಿನಾಂಕ:28.01.2008 ರಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

14/01

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

ಪ್ರತಿ:

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.

2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001

3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.

4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ವಿಕಾಸ ಸೌಧ, ಬೆಂಗಳೂರು–1.

5 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು–9.

7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು–1.

8 ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.

9 ಜಿಲ್ಲಾಧಿಕಾರಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ

10 ಉಪ ಅರಣ್ಯ ಸಂರಕ್ಷಣಾಧಿಕಾರಿ, ಚಿತ್ರದುರ್ಗ ಪ್ರಾದೇಶಿಕ ವಿಭಾಗ, ಚಿತ್ರದುರ್ಗ

11 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

12 M/s Four EF Constructions ., # 25/1, Residency Road, Bangalore-560 025.

13 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

14 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

15 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.